ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE: 21/12/19

# ಸಾಹಿತಿ ಎಲ್.ಎಸ್.ಶೇಷಗಿರಿರಾವ್ ಇನ್ನಿಲ್ಲ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಹಿರಿಯ ಸಾಹಿತಿ ಪ್ರೊ.ಎಲ್.ಎಸ್.ಶೇಷಗಿರಿರಾವ್ ಅವರು ಶುಕ್ರವಾರ ಬೆಂಗಳೂರಿನಲ್ಲಿ



ನಿಧನರಾದರು. ಕಳೆದ ಕೆಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರಿಗೆ 94 ವರ್ಷ ವಯಸ್ಸಾಗಿತ್ತು.

ಪ್ರೊ.ಎಲ್.ಎಸ್.ಶೇಷಗಿರಿರಾವ್ ಅವರು 16 ಫೆಬ್ರವರಿ 1925ರಂದು ಬೆಂಗಳೂರಿನಲ್ಲಿ ಜನಿಸಿದ್ದರು. ಸೆಂಟ್ರಲ್ ಕಾಲೇಜಿನಲ್ಲಿ ಪದವಿ ಪಡೆದು, ಬೆಂಗಳೂರಿನ ಇಂಟರ್ ಮೀಡಿಯಟ್ ಕಾಲೇಜಿನಲ್ಲಿ ಇಂಗ್ಲಿಷ್ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದರು. ಅವರು ಮೂಲತಃ ಧಾರವಾಡದ ಹತ್ತಿರದ ಲಕ್ಷ್ಮೇಶ್ವರ ದೇಶಪಾಂಡೆ ಮನೆತನದವರು. ಕನ್ನಡ ಸಾಹಿತ್ಯ ಲೋಕದಲ್ಲಿ ಅವರು ಎಲ್‌ಎಸ್‌ಎಸ್ ಎಂದೇ ಪ್ರಸಿದ್ಧರು. 2007ರಲ್ಲಿ ಉಡುಪಿಯಲ್ಲಿ ನಡೆದ 74ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದರು. →4

ಮತ್ತಷ್ಟು ಸುದ್ದಿಗಳು → 4

ಸಾಹಿತಿ ಎಲ್.ಎಸ್.ಶೇಷಗಿರಿರಾವ್ ಇನ್ನಿಲ್ಲ

← ಮೊದಲಪುಟದಿಂದ

ಸುದೀರ್ಘಕಾಲದ ಅಧ್ಯಾಪನವೇ ಅಲ್ಲದೆ ಕರ್ನಾಟಕದ ಮುಖ್ಯಮಂತ್ರಿಗಳಾಗಿದ್ದ ಆರ್.ಗುಂಡೂರಾಯರ ಪತ್ರಿಕಾ ಕಾರ್ಯದರ್ಶಿಯಾಗಿ, ಪುಸ್ತಕ ಪ್ರಾಧಿಕಾರದ ಪ್ರಥಮಾಧ್ಯಕ್ಷರಾಗಿ, ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಯಾಗಿಯೂ ಎಲ್‌ಎಸ್‌ಎಸ್ ದುಡಿದಿದ್ದಾರೆ. ಸಣ್ಣ ಕಥೆಯೊಂದಿಗೆ ಸಾಹಿತ್ಯ ಕೃಷಿ ಆರಂಭಿಸಿದ ಅವರು ಮಕ್ಕಳ ಸಾಹಿತ್ಯ, ವಿಮರ್ಶೆ ಹಾಗೂ ಎಲ್ಲಕ್ಕೂ ಮಿಗಿಲಾಗಿ ನಿಘಂಟು ಕರ್ತೃವಾಗಿ ಕನ್ನಡ ಭಾಷೆ, ಸಾಹಿತ್ಯಕ್ಕೆ ನೀಡಿರುವ ಕೊಡುಗೆ ಅನನ್ಯವಾದುದು.

ಶೇಷಗಿರಿರಾವ್ ಅಗಲಿಕೆಗೆ ಸಿಎಂ ಯಡಿಯೂರಪ್ಪ, ಮಾಜಿ ಸಿಎಂ ಎಸ್.ಎಂ. ಕೃಷ್ಣ ಸೇರಿದಂತೆ ಹಲವು ರಾಜಕೀಯ ಗಣ್ಯರು ಹಾಗೂ ಸಾಹಿತಿಗಳು ಸಂತಾಪ ಸೂಚಿಸಿದ್ದಾರೆ.

**ಕೃತಿಗಳು:** ಇಂಗ್ಲಿಷ್ ಸಾಹಿತ್ಯದ ಮೇರು ಕೃತಿಗಳನ್ನು ತಿಳಿಕನ್ನಡಕ್ಕೆ ಅನುವಾದಿಸಿದ್ದು ಶೇಷಗಿರಿರಾವ್ ಅವರ ಹೆಗ್ಗಳಿಕೆ. ಆಲಿವರ್ ಗೋಲ್ಡ್‌ಸ್ಮಿತ್, ಇಂಗ್ಲಿಷ್ ಭಾಷೆಯಲ್ಲಿ ಆಧುನಿಕ ಸಾಹಿತ್ಯ ವಿಮರ್ಶೆ, ಪಾಶ್ಚಾತ್ಯ ಸಾಹಿತ್ಯ ವಿಹಾರ, ಸಾಹಿತ್ಯ ವಿಶ್ಲೇಷಣೆ, ಇಂಗ್ಲಿಷ್ ಸಾಹಿತ್ಯ ಚರಿತ್ರೆ ಇತ್ಯಾದಿ ಕೃತಿಗಳು ಅವರ ಹೆಸರನ್ನು ಸಾಹಿತ್ಯ ವಿದ್ಯಾರ್ಥಿಗಳ ಮನಸ್ಸಿನಲ್ಲಿ ನೆಲೆಗೊಳಿಸಿದವು. ಸಾಮಾನ್ಯ ಮನುಷ್ಯ (ಕಾದಂಬರಿ), ಇದು ಜೀವನ, ಜಗದ ಜಾತ್ರೆಯಲ್ಲಿ, ಮುಟ್ಟಿದ ಗುರಿ ಮತ್ತು ಇತರ ಕಥೆಗಳು, ಮುಯ್ಯಿ ಎಂಬ ಕಥಾಸಂಕಲನಗಳನ್ನು ರಚಿಸಿದ್ದಾರೆ. ಹಂಪಿ ವಿಶ್ವವಿದ್ಯಾಲಯಕ್ಕೆ ಇಂಗ್ಲಿಷ್-ಕನ್ನಡ, ಕನ್ನಡ-ಕನ್ನಡ ನಿಘಂಟನ್ನು ರಚಿಸಿಕೊಟ್ಟಿದ್ದಾರೆ.